# ಹಿಂಬರಹ

ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2016 /5239 ದಿನಾಂಕ: 31-03-2017

ದಿನಾಂಕ:30/03/2017 ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 16 ಎಸ್‌ಆರ್‌ಪಿ 2017 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

ಆಡಳಿತಾಧಿಕಾರಿ 31-3-2017

Sh-est(9) Endsmnt

(1)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ.

ಓದಲಾಗಿದೆ:......
(1) ಸ.ಆ. ಸಂಖ್ಯೆ: ಎಫ್‌ಡಿ 23 ಎಸ್‌ಆರ್‌ಪಿ 2011, ದಿನಾಂಕ: 15.06.2011
(2) ಸ.ಆ. ಸಂಖ್ಯೆ: ಎಫ್‌ಡಿ 07 ಎಸ್‌ಆರ್‌ಪಿ 2012, ದಿನಾಂಕ: 21.04.2012
(3) ಸ.ಆ. ಸಂಖ್ಯೆ: ಎಫ್‌ಡಿ 17 ಎಸ್‌ಆರ್‌ಪಿ 2012, ದಿನಾಂಕ: 14.05.2012
(4) ಸ.ಆ. ಸಂಖ್ಯೆ: ಎಫ್‌ಡಿ 25 ಎಸ್‌ಆರ್‌ಪಿ 2012, ದಿನಾಂಕ: 17.10.2012
(5) ಸ.ಆ. ಸಂಖ್ಯೆ: ಎಫ್‌ಡಿ 09 ಎಸ್‌ಆರ್‌ಪಿ 2013, ದಿನಾಂಕ: 08.05.2013
(6) ಸ.ಆ. ಸಂಖ್ಯೆ: ಎಫ್‌ಡಿ 21 ಎಸ್‌ಆರ್‌ಪಿ 2013 ದಿನಾಂಕ: 03.10.2013
(7) ಸ.ಆ. ಸಂಖ್ಯೆ: ಎಫ್‌ಡಿ 5 ಎಸ್‌ಆರ್‌ಪಿ 2014 ದಿನಾಂಕ: 08.04.2014
(8) ಸ.ಆ. ಸಂಖ್ಯೆ: ಎಫ್‌ಡಿ 17 ಎಸ್‌ಆರ್‌ಪಿ 2014 ದಿನಾಂಕ: 26.09.2014
(9) ಸ.ಆ. ಸಂಖ್ಯೆ: ಎಫ್‌ಡಿ 11 ಎಸ್‌ಆರ್‌ಪಿ 2015 ದಿನಾಂಕ: 24.04.2015
(10) ಸ.ಆ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2015 ದಿನಾಂಕ: 30.09.2015
(11) ಸ.ಆ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2016 ದಿನಾಂಕ: 13.04.2016
(12) ಸ.ಆ. ಸಂಖ್ಯೆ: ಎಫ್‌ಡಿ 33 ಎಸ್‌ಆರ್‌ಪಿ 2016 ದಿನಾಂಕ: 21.10.2016
(12) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಪತ್ರ ದಿನಾಂಕ: 18.03.2017.

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2017,**
**ಬೆಂಗಳೂರು, ದಿನಾಂಕ 30ನೇ ಮಾರ್ಚ್ 2017**

ರಾಜ್ಯ ಸರ್ಕಾರಿ ನೌಕರರುಗಳಿಗೆ 2012ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ 1ನೇ ಜನವರಿ 2017 ರಿಂದ ಜಾರಿಗೆ ಬರುವಂತೆ ತುಟ್ಟಿ ಭತ್ಯೆಯ ದರವನ್ನು ಮೂಲ ವೇತನದ ಶೇಕಡ 40.25 ರಿಂದ ಶೇಕಡ 43.25 ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಸರ್ಕಾರದ ಮತ್ತು ಜಿಲ್ಲಾ ಪಂಚಾಯತಿಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

3. ತುಟ್ಟಿಭತ್ಯೆಯ ಉದ್ದೇಶಕ್ಕಾಗಿ "ಮೂಲ ವೇತನ" ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ,

(ಆ) 2012ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ,

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

4. ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

5. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇಕಡ 40.25 ರಿಂದ ಶೇಕಡ 43.25 ಕ್ಕೆ** ಹೆಚ್ಚಿಸಿ **ದಿನಾಂಕ 1ನೇ ಜನವರಿ 2017** ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

6. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇಕಡ 40.25 ರಿಂದ ಶೇಕಡ 43.25** ಕ್ಕೆ ಹೆಚ್ಚಿಸಿ ದಿನಾಂಕ 1ನೇ ಜನವರಿ 2017 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

7. ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ಪಿಂಚಣಿದಾರರಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

8. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿಭತ್ಯೆಯನ್ನು ನಗದಾಗಿ ಪಾವತಿ ಮಾಡಲಾಗುವುದು.

9. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

10. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಇಲಾಖಾ ಮುಖ್ಯಾಧಿಕಾರಿಗಳು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
23. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**